ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಮೀನುಗಾರಿಕಾ ಉದ್ಯಮದಲ್ಲಿರುವ ಸಮಸ್ಯೆ ನಿವಾರಣೆ ಬಗ್ಗೆ

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :-

276 (353) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಯಾವ ಯಾವ ಭಾಗಗಳಲ್ಲಿ ಮೀನುಗಾರಿಕೆ ನಡೆಯುತ್ತಿದೆ; (ಪ್ರದೇಶವಾರು, ಲಭ್ಯ ಪ್ರಮಾಣ ಕುರಿತಾಗಿ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಆಳ ಸಮುದ್ರದ ಮೀನುಗಾರಿಕೆಯಲ್ಲಿ ತೊಡಗಿರುವವರು ಅನುಭವಿಸುತ್ತಿರುವ ಅನಾನುಕೂಲತೆ, ಕಾರ್ಮಿಕರ ಅಲಭ್ಯತೆ ಸಮಸ್ಯೆಗಳ ಬಗ್ಗೆ ಸರ್ಕಾರ ಗಮನಹರಿಸಿದೆಯೇ ; ಹಾಗಿದ್ದಲ್ಲಿ, ಈ ಕುರಿತಾಗಿ ಕೈಗೊಂಡ ಪರಿಹಾರಾತ್ಮಕ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಇ) ಅವೈಜ್ಞಾನಿಕ ನೀತಿ, ಕೇವಲ ಸಾಂಪ್ರದಾಯಕವಲ್ಲದ ವ್ಯಾಪಾರೀಕರಣ ಉದ್ದೇಶದ ಮೀನುಗಾರಿಕೆಯೂ ಈ ಉದ್ಯಮದ ಮೇಲೆ ವ್ಯೆತಿರಿಕ್ತ ಪರಿಣಾಮ ಬೀರುತ್ತಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರದ ದೀರ್ಘಾವಧಿ ಯೋಜನೆಗಳು ಏನು ? (ಸಂಪೂರ್ಣ ಮಾಹಿತಿ ಒದಗಿಸುವುದು)